ಸಹಕಾರ ಸಂಘಗಳಿಗೆ ಸದಸ್ಯರ ನಾಮಕರಣ

952 - ಶ್ರೀ ಹೆಚ್. ಶಿವಪ್ಪ (ಹರಿಹರ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸಹಕಾರ ಸಂಘದ ಆಡಳಿತ ಮಂಡಳಿಗೆ ಸದಸ್ಯರನ್ನು ನಾಮಕರಣ ಮಾಡುವ ನೀತಿಯನ್ನು ಕೈಬಿಡುವ ಬಗ್ಗೆ ಪ್ರಸ್ತಾವನೆ ಇದೆಯೇ?*

ಆ) *ಸದರಿ ಕಾಯಿದೆಯ ಕಲಂ 30-ಎ ಮತ್ತು 30-ಬಿಯನ್ನು ತೆಗೆದು ಹಾಕಲು ಪ್ರಸ್ತಾವನೆಯೇನಾದರೂ ಇದೆಯೇ?*

ಶ್ರೀ ಎಸ್.ಎಸ್. ಪಾಟೀಲ್ (ಸಹಕಾರ ಸಚಿವರು) :

ಅ) ಸಧ್ಯಕ್ಕೆ ಇಲ್ಲ.

ಆ) ಇದೆ.

ಆಶ್ರಯ ಯೋಜನೆ ಕುರಿತು

954 - ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಆಶ್ರಯ ಯೋಜನೆಯಡಿಯಲ್ಲಿ ನಿವೇಶನ ಹಾಗೂ ಮನೆಗಳ ಹಂಚಿಕೆ ಬಗ್ಗೆ ಶಾಸಕರ ಅಧ್ಯಕ್ಷತೆಯಲ್ಲಿ ಈ ಸಮಿತಿಗಳನ್ನು ರಚಿಸಲಾಗಿದೆಯೇ?*

ಆ) *ಇಲ್ಲದಿದ್ದಲ್ಲಿ ಯಾವಾಗ ಅಂಥಹ ಸಮಿತಿಗಳನ್ನು ರಚಿಸಲಾಗುವುದು?*

ಶ್ರೀ ಹೆಚ್.ಡಿ.ರೇವಣ್ಣ (ವಸತಿ ಮಂತ್ರಿಗಳು) :

ಅ) ಸರ್ಕಾರಿ ಆದೇಶ ಸಂಖ್ಯೆ: ವ�ಇ 71 ಹೆಚ್ಎಹೆಚ್96(ಭಾ), ದಿ:3-3-97ರ ಪ್ರಕಾರ ಶಾಸಕರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ವಸತಿ ಸಮಿತಿಯನ್ನು ರಚಿಸಲಾಗಿದೆ.

ಆ) ಉದ್ಭವಿಸುವುದಿಲ್ಲ.

ಅಕ್ರಮ-ಸಕ್ರಮ ಸಮಿತಿ ಕುರಿತು

955 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಎಷ್ಟು ಅಕ್ರಮ ಸಕ್ರಮ ಸಮಿತಿಗಳಿವೆ?*